**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ-181 ಹೊಸಕೆರೆಹಳ್ಳಿ, ಬೆಂಗಳೂರು

ಸಂ: ಸ.ಅ/ವಾ-181/ಪಿ.ಆರ್/ /2021-22

ದಿನಾಂಕ : 05-02-2022

## ವಾರ್ಡ್ ಸಮಿತಿಯ ಸಭೆಯ ನಡವಳಿಗಳು

ವಿಷಯ:- ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ :ಐಪಿ12(58)ಪಿಆರ್/35/2020-21 ದಿನಾಕ :21-09-2020 ರವರ ಆದೇಶದಂತೆ ದಿನಾಂಕ :05-02-2022 ರಂದು ವಾರ್ಡ್ ಸಂಖ್ಯೆ-181 ಕುಮಾರಸ್ವಾಮಿ ಬಡಾವಣೆ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ವಾರ್ಡ್ ಕಮಿಟಿ ಸಭೆ ನಿಗಧಿಪಡಿಸಿ ದಿನಾಂಕ :05-02-2022 ರಂದು ವಾರ್ಡ್ ಕಛೇರಿಯಲ್ಲಿ ಬೆಳಿಗ್ಗೆ 10.30 ಗಂಟೆಗೆ ಶ್ರೀ ನಾಗರಾಜ್ ಕಿರಣ್ ನೋಡಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ಹಾಗೂ ಶ್ರೀ ವೆಂಕಟಾಚಲಪಯ್ಯ.ಕೆ ಸದಸ್ಯ ಕಾರ್ಯದರ್ಶಿ ರವರ ಕಾರ್ಯಾಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು.

ಸಭೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರು ಹಾಜರಿರುತ್ತಾರೆ ಹಿಂದಿನ ವಾರ್ಡ್ ಸಭೆಯ ನಡವಳಿಗಳನ್ನು ಚರ್ಚಿಸಲಾಗಿರುತ್ತದೆ

1) ವಾರ್ಡ್‌ನಲ್ಲಿ ಕೆಲಸ ಪರಿವೀಕ್ಷಕರು ಇಲ್ಲದಿರುವ ಬಗ್ಗೆ ಸದಸ್ಯರು ಪ್ರಸ್ತಾಪಿಸಿರುತ್ತಾರೆ.
2) 71ನೇ ಅಡ್ಡರಸ್ತೆ ವಾಸವಿ ಆಸ್ಪತ್ರೆ ಎದುರು ರಸ್ತೆಗೆ ಡಾಂಬರೀಕರಣ ಮಾಡಲು ಸಭೆಯಲ್ಲಿ ಚರ್ಚಿಸಲಾಗಿದೆ.
3) 44ನೇ ಮತ್ತು 45ನೇ ಅಡ್ಡರಸ್ತೆಯ ಸಿಮೆಂಟ್ ರಸ್ತೆ ಮಾಡಲು ಚರ್ಚಿಸಲಾಗಿರುತ್ತದೆ.
4) 12ನೇ ಮತ್ತು 13ನೇ ಮುಖ್ಯರಸ್ತೆ ಕುಮಾರಸ್ವಾಮಿ ಬಡಾವಣೆಯಲ್ಲಿ ಡಾಂಬರೀಕರಣ ಮಾಡಲು ಸಾರ್ವಜನಿಕರು ಸಭೆಯಲ್ಲಿ ಕೋರಿದಾಗ, ಸಭೆಯಲ್ಲಿದ್ದ ಸಹಾಯಕ ಅಭಿಯಂತರರಿಗೆ ಮಾನ್ಯ ಅಧ್ಯಕ್ಷರು ತಿಳಿದಾಗ ಕೂಡಲೇ ಡಾಂಬರೀಕರಣ ಕಾಮಗಾರಿಯನ್ನು ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.
5) ಕುಮಾರಸ್ವಾಮಿ ಬಡಾವಣೆಯ ವ್ಯಾಪ್ತಿಯಲ್ಲಿ ರಸ್ತೆಗಳನ್ನು ಗುರುತಿಸಲು ನಾಮಫಲಕಗಳನ್ನು ಅಳವಡಿಸುವಂತೆ ಸಾರ್ವಜನಿಕರು ಕೋರಿದಾಗ ಸಭೆಯಲ್ಲಿದ್ದ ಸಹಾಯಕ ಅಭಿಯಂತರರು ಕೂಡಲೇ ಕ್ರಮ ವಹಿಸುವುದಾಗಿ ಮಾನ್ಯ ಅಧ್ಯಕ್ಷರ ಗಮನಕ್ಕೆ ತಂದರು.
6) ಕುಮಾರಸ್ವಾಮಿ ಬಡಾವಣೆಯಲ್ಲಿ ಬಾಕಿ ಇರುವ ಕಂದಾಯವನ್ನು ತುರ್ತಾಗಿ ವಸೂಲಿ ಮಾಡಲು ನೋಡಲ್ ಅಧಿಕಾರಿಯವರು ಸೂಚಿಸಿರುತ್ತಾರೆ.

ಮಾನ್ಯ ಆಯುಕ್ತರವರ ಸೂಚನೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲು ಕೋರುತ್ತಾ ಮತ್ತು ಮುಂದಿನ ಸಭೆಯಲ್ಲಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ ರವರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿ ಯಾವುದೇ ಪ್ರಸ್ತಾವನ ಮಾಡದಿದ್ದ ಕಾರಣ ನೋಡಲ್ ಅಧಿಕಾರಿ/ಅಧ್ಯಕ್ಷರ ಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಸಮಿತಿ ಸಂಚಾಲಕರು

ವಾರ್ಡ್ 181 ರ ನೋಡಲ್ ಅಧಿಕಾರಿ.